## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 516 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.07.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ತ್ರಿಸ್ತರ ಸ್ಥಳೀಯ ಸಂಸ್ಥೆಗಳಾದ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳ ಕಾರ್ಯನಿರ್ವಹಣೆ ಕುರಿತು ಪ್ರಾರಂಭವಾದಾಗಿನಿಂದ ಚಾಲ್ತಿಯಲ್ಲಿರುವ ನಿಯಮಗಳು ಯಾವುವು; ಅವುಗಳನ್ನು ಯಾವಾಗ ತಿದ್ದುಪಡಿ ಹಾಗೂ ಸ್ಥಳೀಯ ಪರಿಸ್ಥಿತಿಗೆ ಅನುಗುಣವಾಗಿ ಬದಲಾಯಿಸಲಾಗಿದೆ; (ವರ್ಷವಾರು ವಿವರಗಳನ್ನು ನೀಡುವುದು) | 1983 ರಲ್ಲಿ ರಾಜ್ಯ ಸರ್ಕಾರ ಕರ್ನಾಟಕ ಜಿಲ್ಲಾ ಪರಿಷತ ತಾಲ್ಲೂಕ್ ಪಂಚಾಯತ್ ಸಮಿತಿ, ಮಂಡಲ್ ಪಂಚಾಯತ ಮತ್ತು ನ್ಯಾಯ ಪಂಚಾಯತ್ ಅಧಿನಿಯಮ 1983ನ್ನು ಜಾರಿಗೊಳಿಸಿತು. ಈ ಅಧಿನಿಯಮದ ಪ್ರಕಾರ ಮಂಡಲ ಪಂಚಾಯತ್, ತಾಲ್ಲೂಕು ಪಂಚಾಯತ್ ಸಮಿತಿ ಹಾಗೂ ಜಿಲ್ಲಾ ಪರಿಷತ್ತುಗಳನ್ನು ಸ್ಥಾಪಿಸಲಾಗಿತ್ತು. ಮಂಡಲ್ ಪಂಚಾಯತ ಹಾಗೂ ಜಿಲ್ಲಾ ಪರಿಷತ್ತುಗಳಿಗೆ ನೇರ ಚುನಾವಣೆಯನ್ನು ನಡೆಸಲಾಗುತಿತ್ತು.<br><br>ಸಂವಿಧಾನದ 73ನೇ ತಿದ್ದುಪಡಿ ಅನುಸಾರ ರಾಷ್ಟ್ರ ವ್ಯಾಪ್ತಿಯ ಎಲ್ಲಾ ರಾಜ್ಯಗಳಿಗೂ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಸಂವಿಧಾನ ಬದ್ಧಗೊಳಸಲಾಗಿದೆ. ಈ ತಿದ್ದುಪಡಿ ಅನುಸಾರ ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ನ್ನು ದಿನಾಂಕ:10-05-1993 ರಿಂದ ಕರ್ನಾಟಕ ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ. ಈ ಅಧಿನಿಯಮದನ್ವಯ ರಾಜ್ಯದಲ್ಲಿ ಮೂರು ಸ್ತರದ ಪಂಚಾಯತ್ ರಾಜ್ ಸಂಸ್ಥೆಗಳನ್ನು ಅಂದರೆ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳನ್ನು ರಚಿಸಲಾಗಿದೆ. ಈ ಮೂರು ಸಂಸ್ಥೆಗಳ ಸದಸ್ಯರನ್ನು ನೇರ ಚುನಾವಣೆ ಮುಖಾಂತರ ಚುನಾಯಿಸಲಾಗುವುದು. ಈ ಸಂಸ್ಥೆಗಳ ಅಧಿಕಾರವಧಿ 5 ವರ್ಷಗಳಾಗಿರುತ್ತದೆ.<br><br>ಪ್ರಸ್ತುತ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಡಿಸೆಂಬರ್ 2020 ರಲ್ಲಿ ಚುನಾವಣೆ ನಡೆದಿರುತ್ತದೆ. ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳಿಗೆ ಚುನಾವಣೆಯನ್ನು ನಡೆಸಬೇಕಾಗಿರುತ್ತದೆ.<br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಕ್ಕೆ 1995, 1996, 1997, 1998, 1999, 2000, 2002, 2010, 2011, 2013, 2015, 2017, 2020, 2021, 2022, 2023 ಮತ್ತು 2024 ರಲ್ಲಿ ತಿದ್ದುಪಡಿ ತರಲಾಗಿದೆ.<br><br>ಈ ಅಧಿನಿಯಮದಡಿ ಪ್ರಕರಣಕ್ಕೆ ಸಂಬಂಧಿಸಿದಂತೆ ನಿಯಮಗಳನ್ನು ರಚಿಸಲಾಗಿದೆ. |
| (ಆ) | ಈ ತ್ರಿಸ್ತರ ಸ್ಥಳೀಯ ಸಂಸ್ಥೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ಅನುಪಾತ ಅಥವಾ ಮಾದರಿಯನ್ನು ಯಾವಾಗ ನಿರ್ಧರಿಸಲಾಗಿತ್ತು ಮತ್ತು | 1983 ರಲ್ಲಿ ಮಂಡಲ್ ಪಂಚಾಯಿತಿ ಮತ್ತು ಜಿಲ್ಲಾ ಪರಿಷತ್ ವ್ಯವಸ್ಥೆ ಬಂದ ನಂತರ, ಮಂಡಲ ಪಂಚಾಯಿತಿಗಳಿಗೆ ಕಾರ್ಯದರ್ಶಿಗಳನ್ನು ಜಿಲ್ಲಾಧಿಕಾರಿಗಳು ನೇಮಿಸುತ್ತಿದ್ದರು. ಪ್ರತಿ ಮಂಡಲ ಪಂಚಾಯಿತಿಗಳಲ್ಲಿ ಕರವಸೂಲಿಗಾರ, ಗುಮಾಸ |

| | | |
|---|---|---|
| | ಯಾವಾಗ ಅದನ್ನು ಬದಲಾಯಿಸಲಾಗಿತ್ತು ಹಾಗೂ ಹೆಚ್ಚಿಸಲಾಗಿತ್ತು; ಈಗಿನ ಪರಿಸ್ಥಿತಿಗೆ ಮತ್ತು ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ 30 ವರ್ಷಗಳ ಹಿಂದೆ ನಿಗಧಿಪಡಿಸಿದ ಸಿಬ್ಬಂದಿ ಮಾದರಿಯನ್ನು ಬದಲಾಯಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು; (ವಿವರ ನೀಡುವುದು) | ಮತ್ತು ಸ್ವಚ್ಛತಾಗಾರ/ ಅಟೆಂಡರ್ ಹುದ್ದೆಗಳಿದ್ದು ಇವರುಗಳ ನೆರವಿನಿಂದ ಮಂಡಲ್ ಪಂಚಾಯಿತಿ ಕಾರ್ಯನಿರ್ವಹಣೆಯಾಗುತ್ತಿತ್ತು. ತಾಲ್ಲೂಕು ಪಂಚಾಯಿತಿಯ ಸಮಿತಿಗಳ ಕಾರ್ಯನಿರ್ವಹಣೆಯನ್ನು ಹಿಂದಿನ ತಾಲ್ಲೂಕು ಅಭಿವೃದ್ಧಿ ಮಂಡಳಿಗಳಲ್ಲಿ ಸೇವೆ ಸಲ್ಲಿಸುತ್ತಿದ್ದ ಅಧಿಕಾರಿ/ ನೌಕರರುಗಳಿಂದ ಕಾರ್ಯ ನಿರ್ವಹಣೆ ನಡೆಸಲಾಗುತ್ತಿತ್ತು. ಜಿಲ್ಲಾ ಪರಿಷತ್‌ಗಳಲ್ಲಿ, ಜಿಲ್ಲಾಧಿಕಾರಿಗಳ ದರ್ಜೆಗೆ ಕಡಿಮೆ ಇಲ್ಲದ ಹಿರಿಯ ಸರ್ಕಾರದ ಅಧಿಕಾರಿಯನ್ನು ಜಿಲ್ಲಾ ಪರಿಷತ್ ಮುಖ್ಯ ಕಾರ್ಯದರ್ಶಿಯನ್ನಾಗಿ ನೇಮಿಸಲಾಗುತ್ತಿತ್ತು.<br><br>ಜಿಲ್ಲೆಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ವಿವಿಧ ಇಲಾಖೆಯ ಅಧಿಕಾರಿಗಳ ಸೇವೆಯನ್ನು ಜಿಲ್ಲಾ ಪರಿಷತ್ ಆಡಳಿತ ವ್ಯಾಪ್ತಿಗೆ ವರ್ಗಾಯಿಸಲಾಗಿತ್ತು. ಜಿಲ್ಲಾ ಪರಿಷತ್ ಕಾರ್ಯಾಲಯದ ಕಾರ್ಯನಿರ್ವಹಣೆಗೆ ಅಗತ್ಯ ಅಧಿಕಾರಿ ವರ್ಗದವರ ಸೇವೆಯನ್ನು ನಿಯೋಜನೆ ಮೇಲೆ ಪಡೆಯಲಾಗುತ್ತಿತ್ತು.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಅಧಿನಿಯಮ, 1993 ಜಾರಿಗೆ ಬಂದ ನಂತರ, ಅಧಿಕಾರ ವಿಕೇಂದ್ರಿಕರಣದ ತತ್ವದ ಅನುಸಾರ ವಿವಿಧ ಇಲಾಖೆಗಳ 29 ವಿಷಯಗಳ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅನುವಾಗುವಂತೆ ಗ್ರಾಮ ಪಂಚಾಯಿತಿಗಳಿ ಹೆಚ್ಚಿನ ಅನುದಾನ ಹಾಗೂ ಅಧಿಕಾರವನ್ನು ನೀಡಲಾಗಿರುತ್ತದೆ. ಆದಕಾರಣ ಪ್ರತಿ ಗ್ರಾಮ ಪಂಚಾಯಿತಿಗೆ ಸರ್ಕಾರಿ ಸೇವಾ ವೃಂದದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್-1) ಹಾಗೂ (ಗ್ರೇಡ್-2) ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ಸೃಜಿಸಿ, ನೇಮಕಾತಿ ಮಾಡಲಾಗಿರುತ್ತದೆ. ಇವರುಗಳ ಜೊತೆಗೆ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಕರವಸೂಲಿಗಾರ, ಗುಮಾಸ್ತ ಕಂ ಡಾಟಾ ಎಂಟ್ರಿ ಅಪರೇಟರ್, ವಾಟರ್ ಆಪರೇಟರ್, ಅಟೆಂಡೆಂಟ್ ಹಾಗೂ ಕ್ಲೀನರ್ಸ್ ಹುದ್ದೆಗಳನ್ನು ಸೃಜಿಸಿ ನೇಮಕಾತಿ ಮಾಡಲಾಗಿರುತ್ತದೆ. ಪ್ರಸ್ತುತ ಗ್ರಾಮ ಪಂಚಾಯಿತಿ ಆಡಳಿತ ವ್ಯವಸ್ಥೆ ಸದೃಢವಾಗಿರುತ್ತದೆ. ಪ್ರತಿ ತಾಲ್ಲೂಕು ಪಂಚಾಯಿತಿಗಳಿಗೆ ಆಸಿಸ್ಟೆಂಟ್ ಕಮೀಷನರ್ ದರ್ಜೆಯ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರ 2 ಹುದ್ದೆಗಳು ಮತ್ತು ಲೆಕ್ಕಾಧಿಕಾರಿಗಳು, ತಾಲ್ಲೂಕು ಯೋಜನಾಧಿಕಾರಿಗಳ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಪ್ರಸ್ತುತ ಪ್ರತಿಯೊಂದು ತಾಲ್ಲೂಕು ಪಂಚಾಯಿತಿಯು ಆಡಳಿತಾತ್ಮವಾಗಿ ಸದೃಡಗೊಂಡಿರುತ್ತದೆ. ಜಿಲ್ಲಾ ಪಂಚಾಯಿತಿಗಳಿಗೆ ಜಿಲ್ಲಾಧಿಕಾರಿಗಳ ದರ್ಜೆಯ ಅಧಿಕಾರಿಯನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನಾಗಿ ನೇಮಸಲಾಗಿರುತ್ತದೆ. ಇವರಿಗೆ ನೆರವಾಗಲು ಜಿಲ್ಲಾ ಪಂಚಾಯಿತಿಗಳಲ್ಲಿ 1 ಅಥವಾ 2 ಉಪ ಕಾರ್ಯದರ್ಶಿಗಳು, ಸಹಾಯಕ ಕಾರ್ಯದರ್ಶಿಗಳು, ಮುಖ್ಯ ಯೋಜನಾಧಿಕಾರಿಗಳು, ಯೋಜನಾ ನಿರ್ದೇಶಕರು ಮತ್ತು ಮುಖ್ಯ ಲೆಕ್ಕಾಧಿಕಾರಿ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಈ ಎಲ್ಲಾ ಅಧಿಕಾರಿಗಳ ನೆರವಿನ ಜೊತೆಗೆ ಜಿಲ್ಲೆಯ ವಿವಿಧ ಅಧಿಕಾರಿಗಳ ಸೇವೆಯನ್ನು ಜಿಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳಲು ಜಿಲ್ಲಾ ಪಂಚಾಯಿತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅಧಿಕಾರವಿರುತ್ತದೆ.<br><br>ಒಟ್ಟಾರೆ ಹಿಂದಿನ 30 ವರ್ಷಗಳ ನಂತರ ಪಂಚಾಯತ್ ರಾಜ್ ವ್ಯವಸ್ಥೆಯು ಆಡಳಿತಾತ್ಮಕವಾಗಿ ಸದೃಢಗೊಂಡಿದ್ದು ಸಂವಿಧಾನದ 73 ನೇ ತಿದ್ದುಪಡಿಯನುಸಾರ ಗ್ರಾಮೀಣ |

| | | |
|---|---|---|
| | | ಹಂತದಲ್ಲಿ ಅಧಿಕಾರ ವಿಕೇಂದ್ರಿಕರಣಗೊಂಡಿರುತ್ತದೆ ಹಾಗ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸ ಆಡಳಿತ ವ್ಯವಸ್ಥೆಯು ಕರ್ತವ್ಯ ನಿರ್ವಹಿಸುತ್ತಿದೆ. |
| (ಇ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ವಿಷಯಗಳನ್ನು ಸೇರಿಸಿಕೊಂಡು ಮಾಡಿದ ಸುಸಜ್ಜಿತವಾದ ಪಂಚತಂತ್ರ ತಂತ್ರಾಂಶದ ಸರ್ವರ್ ತೊಂದರೆಯನ್ನು ಸರಿಪಡಿಸಲು ಏನು ಕ್ರಮ ಕೈಗೊಂಡಿದೆ; ಈ ಹಿನ್ನಲೆಯಲ್ಲಿ ಸರ್ವರ್ ವಿಫಲವಾದಾಗ ಆನ್ ಲೈನ್ ಸೇವೆಗಳನ್ನು ಹಾಗೂ ಸಾಮಾನ್ಯ ಸಭೆಯ ನಡವಳಿಗಳನ್ನು ಮತ್ತು ಫೋಟೋಗಳನ್ನು ಅಪ್ಲೋಡ್ ಮಾಡಲು ಎರಡು ದಿನ ಅಥವಾ 48 ಗಂಟೆಗಳ ಅವಕಾಶ ನೀಡಿ ಸದರಿ ವ್ಯವಸ್ಥೆಯನ್ನು ಸರಿಪಡಿಸಲು ಕಾರ್ಯಕ್ರಮ ರೂಪಿಸಿದೆಯೇ; (ವಿವರ ನೀಡುವುದು) | ಪಂಚತಂತ್ರ 2.0 ತಂತ್ರಾಂಶದ ಸರ್ವರ್ ತೊಂದರೆಯನ ಸರಿಪಡಿಸಲು ಪಂಚತಂತ್ರ 2.0 ತಂತ್ರಾಂಶಕ್ಕೆ ಹೆಚ್ಚುವರಿ ಸರ್ವ ಗಳನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ ಹಾಗೂ ಸರ್ವ ವಿಫಲವಾದಾಗ ಸದರಿ ದಿನದಂದು ಆಯೋಜಿಸಲಾ ಸಭೆಗಳನ್ನು ಮೂರು ದಿನಗಳ ಕಾಲ ಮುಂದುವರೆಸಿ, ಅವುಗಳನ ಮುಕ್ತಾಯಗೊಳಿಸಿ ಸಭಾ ನಡವಳಿಗಳನ್ನು ಡಿಜಿಟಲ್ ಸ ಮಾಡಲು ಅವಕಾಶ ನೀಡಲಾಗುತ್ತಿದೆ. |
| (ಈ) | ಪಂಚಾಯತ್ ರಾಜ್ ಇಲಾಖೆಯು ಗ್ರಾಮ ಪಂಚಾಯಿತಿಗಳ ಮೇಲೆ ಬೇರೆ ಇಲಾಖೆಯ ಕೆಲಸಗಳನ್ನು ವಹಿಸದಂತೆ ಇಲಾಖೆ ಆದೇಶ ನೀಡಿದ್ದು, ಸಂಯೋಜನೆಯೊಂದಿಗೆ ಮಾಡಬೇಕಾದ ಕೆಲಸಗಳನ್ನು ಗ್ರಾಮ ಪಂಚಾಯಿತಿಗೆ ಸಂಯೋಜನೆ ಮಾತ್ರ ಮಾಡುವಂತೆ ಹಾಗೂ ಅದರ ಉಳಿದ ನಿರ್ವಹಣಾ ಪೂರ್ಣ ಹೊಣೆಯನ್ನು ಆಯಾಯ ಇಲಾಖೆಗಳಿಗೆ ವಹಿಸಲು ಸೂಕ್ತ ಆದೇಶ ಮಾಡಲಾಗುತ್ತಿದೆಯೇ? (ವಿವರ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಇಲಾಖೆಯ ವತಿಯಿಂದ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಹಲವಾರು ಜನೋಪಯೋಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಅವುಗಳ ಕಾರ್ಯವೇ ಸಾಕಷ್ಟು ಇರುವುದರಿಂದ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಬೇರೆ ಕ್ಷೇತ್ರಿಯ ಇಲಾಖೆಗಳ ಯೋಜನೆಗಳನ್ನು ಅನುಷ್ಠಾನಗೊಳಿಸುವುದಾಗಲಿ ಅಥವಾ ಮೇಲುಸ್ತುವಾರಿ ನೀಡಿದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನಿಗಧಿಗೊಳಿಸಿರುವ ಗುರಿಯನ್ನು ನಿಗಧಿತ ಅವಧಿಯಲ್ಲಿ ಕಾರ್ಯಗತ ಗೊಳಿಸಲು ಸಾಧ್ಯವಾಗುವುದಿಲ್ಲ. ಕ್ಷೇತ್ರ ಇಲಾಖೆಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯೊಂದಿಗೆ ಸಮಾಲೋಚನೆ ನಡೆಸದೇ ನೀಡಲಾಗಿರುವ ಜವಾಬ್ದಾರಿಗಳನ್ನು ಕೂಡಲೇ ಹಿಂಪಡೆಯುವಂತೆ ಮತ್ತು ಇನ್ನು ಮುಂದೆ ಯಾವುದೇ ಕ್ಷೇತ್ರಿಯ ಇಲಾಖೆಗಳ ಜವಾಬ್ದಾರಿಯನ್ನು ವಹಿಸದಂತೆ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 03 ಗ್ರಾಪಂಕಾ 2016, ದಿನಾಂಕ:02-01-2016 ರಲ್ಲಿ ಮತ್ತು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಪತ್ರ ಸಂಖ್ಯೆ: ಕೆಪಿಆರ್‌ಸಿ-ಜಿಪಿಎ/ಜಿಪಿಎಸ್/22/2024, ದಿನಾಂಕ:24-06-2024 ರಲ್ಲಿ ಸೂಚನೆ ನೀಡಲಾಗಿದೆ. |

ಸಂಖ್ಯೆ: ಗ್ರಾಅಪ 316 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.